Akashvani : Bangalore
National Bulletin In Kannada
01.06.2024 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು:

- ೭ನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿ
- ದೇಶದ ವಾಯುವ್ಯ ಮತ್ತು ಉತ್ತರ ಭಾಗದಲ್ಲಿ ತೀವ್ರ ಬಿಸಿಗಾಳಿ ಪರಿಸ್ಥಿತಿ; ಶಾಖಾಘಾತಕ್ಕೆ ಬಿಹಾರದಲ್ಲಿ ೨೯; ಉತ್ತರಪ್ರದೇಶದಲ್ಲಿ ೬ ಮಂದಿ ಸಾವು
- ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಕಾರ್ಯಕ್ರಮ ಘೋಷಿಸಿದ - ಜಲಶಕ್ತಿ ಸಚಿವಾಲಯ
- ವಿಶ್ವ ಬಾಕ್ಸಿಂಗ್ ಕ್ವಾಲಿಫೈಯರ್ ಪಂದ್ಯಾವಳಿ; ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದ ನಿಶಾಂತ್ ದೇವ್

******

೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಅಂತಿಮ ಘಟ್ಟಕ್ಕೆ ದೇಶ ಸನ್ನಿಹಿತವಾಗಿದ್ದು, ಇಂದು ಏಳನೇ ಹಾಗೂ ಅಂತಿಮ ಹಂತದ ಲೋಕಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿದೆ. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡಿಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದೆ. ಮತದಾನ ಈಗಾಗಲೇ ಆರಂಭಗೊಂಡಿದ್ದು, ಸಂಜೆ ೬ ಗಂಟೆವರೆಗೆ ಮತದಾರರು ತಮ್ಮ ಹಕ್ಕು ಚಲಾಯಿಸಬಹುದಾಗಿದೆ. ಉತ್ತರ ಪ್ರದೇಶ ಮತ್ತು ಪಂಜಾಬ್‌ನಲ್ಲಿ ತಲಾ ೧೩, ಪಶ್ಚಿಮ ಬಂಗಾಳದಲ್ಲಿ ೯, ಬಿಹಾರದಲ್ಲಿ ೮, ಒಡಿಶಾದಲ್ಲಿ ೬, ಹಿಮಾಚಲ ಪ್ರದೇಶದಲ್ಲಿ ೪, ಜಾರ್ಖಂಡ್‌ನಲ್ಲಿ ೩ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ೧ ಲೋಕಸಭಾ ಕ್ಷೇತ್ರಕ್ಕೆ ಚುನಾವಣೆ ನಡೆಯುತ್ತಿದ್ದು, ೯೦೪ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ.ಇದೇ ವೇಳೆ ಒಡಿಶಾದ ೪೨ ವಿಧಾನಸಭಾ ಕ್ಷೇತ್ರಗಳಿಗೂ ಮತದಾನ ಜರುಗುತ್ತಿದೆ.

ಮುಕ್ತ ಹಾಗೂ ನ್ಯಾಯಯುತ ಮತದಾನಕ್ಕೆ ಚುನಾವಣಾ ಆಯೋಗ ಸಿದ್ಧತೆ ಮಾಡಿಕೊಂಡಿದ್ದು, ಬಿಸಿಗಾಳಿ ಪರಿಸ್ಥಿತಿ ಹಾಗೂ ತೀವ್ರ ತಾಪಮಾನದಿಂದ ಎದುರಾಗುವ ಸವಾಲುಗಳನ್ನು ತಗ್ಗಿಸಲು, ಮತದಾರರ ಆರೋಗ್ಯ ಕಾಪಾಡಲು ಅಗತ್ಯ ಕ್ರಮಗಳನ್ನು ಜಾರಿಗೆ ತರಲು ಚುನಾವಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಒಟ್ಟು ೧೦ ಲಕ್ಷದ ೯೦ ಸಾವಿರಕ್ಕೂ ಅಧಿಕ ಸಿಬ್ಬಂದಿಯನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಲಾಗಿದೆ. ಈ ಹಂತದಲ್ಲಿ ೧೦ ಕೋಟಿ ೬೦ ಲಕ್ಷಕ್ಕೂ ಅಧಿಕ ಅರ್ಹ ಮತದಾರರಿದ್ದಾರೆ. ಅಲ್ಲದೇ, ಒಟ್ಟು ೨೦೧ ಅಂತಾರಾಷ್ಟ್ರೀಯ ಗಡಿ ಚೆಕ್ ಪೋಸ್ಟ್‌ಗಳು ಮತ್ತು ೯೦೬ ಅಂತರ-ರಾಜ್ಯ ಗಡಿ ಚೆಕ್‌ಪೋಸ್ಟ್‌ಗಳಲ್ಲಿ ಯಾವುದೇ ಅಕ್ರಮ ಚಟುವಟಿಕೆಗಳು ನಡೆಯದಂತೆ ನಿಗಾವಹಿಸಲಾಗಿದೆ. ಈ ಹಂತದಲ್ಲಿ ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ನಾಯಕರಾದ ಅನುರಾಗ್ ಸಿಂಗ್ ಠಾಕೂರ್, ರವಿಶಂಕರ್ ಪ್ರಸಾದ್, ಕಾಂಗ್ರೆಸ್ ನಾಯಕರಾದ ಮನೀಷ್ ತಿವಾರಿ, ವಿಕ್ರಮಾಧಿತ್ಯ ಸಿಂಗ್, ಆರ್‌ಜೆಡಿ ನಾಯಕಿ ಮಿಸಾ ಭಾರತಿ, ತೃಣಮೂಲ ಕಾಂಗ್ರೆಸ್ ಮುಖಂಡ ಅಭಿಷೇಕ್ ಬ್ಯಾನರ್ಜಿ ಕಣದಲ್ಲಿರುವ ಪ್ರಮುಖರಾಗಿದ್ದಾರೆ. ಇಂದಿನ ಮತದಾನ ಪ್ರಕ್ರಿಯೆ ಪೂರ್ಣಗೊಳ್ಳುತ್ತಿದ್ದಂತೆ, ಎಲ್ಲಾ ಹಂತಗಳ ಸಾರ್ವತ್ರಿಕ ಚುನಾವಣೆ ಮುಕ್ತಾಯವಾಗಲಿದ್ದು, ಮತ ಎಣಿಕೆ ಕಾರ್ಯ ಜೂನ್ ೪ರಂದು ನಡೆಯಲಿದೆ. ಏತನ್ಮಧ್ಯೆ ಬಿಹಾರದಲ್ಲಿ ಭೋಜ್‌ಪುರ್ ಜಿಲ್ಲೆಯ ಅಗಿಯಾವ್ ವಿಧಾನಸಭಾ ಕ್ಷೇತ್ರದ ಶಾಸಕ ಸಿಪಿಐ-ಎಂಎಲ್ ಪಕ್ಷದ ಮನೋಜ್ ಮನ್ಜಿಲ್ ಹತ್ಯೆ ಪ್ರಕರಣದಲ್ಲಿ ಅಪರಾಧ ಸಾಬೀತಾಗಿರುವ ಹಿನ್ನೆಲೆಯಲ್ಲಿ ಈ ಕ್ಷೇತ್ರಕ್ಕೆ ೭ನೇ ಹಂತದ ಲೋಕಸಭಾ ಚುನಾವಣೆಯಲ್ಲಿ ಏಕಕಾಲಕ್ಕೆ ಉಪಚುನಾವಣೆ ನಡೆಸಲು ಆಯೋಗ ನಿರ್ಧರಿಸಿದೆ. ಈ ಉಪಚುನಾವಣೆಯ ಕಣದಲ್ಲಿ ಒಟ್ಟು ೯ ಅಭ್ಯರ್ಥಿಗಳಿದ್ದಾರೆ.

******

ದೇಶದ ವಾಯವ್ಯ ಮತ್ತು ಮಧ್ಯ ಭಾಗಗಳು ಸೇರಿದಂತೆ ಹಲವು ಪ್ರದೇಶಗಳು ಇನ್ನೂ ತೀವ್ರ ಬಿಸಿಗಾಳಿ ಪರಿಸ್ಥಿತಿ ಎದುರಿಸುತ್ತಿವೆ. ರಾಜಸ್ತಾನ, ಪಂಜಾಬ್, ಹರಿಯಾಣ, ಚಂಡಿಗಢ-ದೆಹಲಿ, ಉತ್ತರ ಪ್ರದೇಶ, ಬಿಹಾರ, ಪೂರ್ವ ಮಧ್ಯಪ್ರದೇಶ, ಜಾರ್ಖಂಡ್ ಹಾಗೂ ಒಡಿಶಾದ ಹಲವು ಭಾಗಗಳಲ್ಲಿ ಬಿಸಿಗಾಳಿಯಿಂದ ತೀವ್ರ ತರವಾದ ಬಿಸಿಲಿನ ವಾತಾವರಣವಿದೆ. ಉತ್ತರ ಪ್ರದೇಶದ ಮಿರ್ಜಾಪುರ್‌ನಲ್ಲಿ ಚುನಾವಣಾ ಕಾರ್ಯಕ್ಕಾಗಿ ನಿಯೋಜನೆಗೊಂಡಿದ್ದ ಗೃಹರಕ್ಷಕ ಪಡೆಯ ೬ ಸಿಬ್ಬಂದಿ ಸಾವನ್ನಪ್ಪಿರುವ ಕುರಿತು ವರದಿಯಾಗಿದೆ.

ಚುನಾವಣಾ ಕಾರ್ಯಕ್ಕಾಗಿ ಆಗಮಿಸಿದ್ದ ಒಟ್ಟು ೨೩ ಸಿಬ್ಬಂದಿ ಶಾಖಾಘಾತದ ಪರಿಣಾಮದಿಂದ ಅಸ್ವಸ್ಥಗೊಂಡಿದ್ದರು. ಅವರನ್ನು ತಕ್ಷಣ ತುರ್ತು ಚಿಕಿತ್ಸಾ ಕೇಂದ್ರಕ್ಕೆ ಸೇರ್ಪಡೆಗೊಳಿಸಿತ್ತಾದರೂ ಆರು ಜನ ಸಿಬ್ಬಂದಿ ಚಿಕಿತ್ಸೆಯ ವೇಳೆ ಕೊನೆಯುಸಿರೆಳೆದರು. ನಿನ್ನೆ ಈ ಪ್ರದೇಶದಲ್ಲಿ ೪೪ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿತ್ತು ಎಂದು ಹವಾಮಾನ ಇಲಾಖೆ ತಿಳಿಸಿದೆ. ಬಿಹಾರದಲ್ಲಿ ಬಿಸಿಲಿನ ತಾಪದಿಂದಾಗಿ ಒಟ್ಟು ೨೯ ಜನರು ಸಾವನ್ನಪ್ಪಿದ್ದರೆ, ಒಡಿಶಾದಲ್ಲಿ ಕಳೆದ ೪೮ ಗಂಟೆಗಳಲ್ಲಿ ೧೪ ಜನರು ಶಾಖಾಘಾತದಿಂದ ಸಾವನ್ನಪಿರುವ ಕುರಿತು ವರದಿಯಾಗಿದೆ.

******

ಅಸ್ಸಾಂನಲ್ಲಿ ನಿನ್ನೆ ಪ್ರವಾಹ ಪರಿಸ್ಥಿತಿಯಿಂದಾಗಿ ಸಾವನ್ನಪ್ಪಿದವರ ಸಂಖ್ಯೆ ೬ಕ್ಕೇರಿದೆ. ಕ್ಯಾಚಾರ್ ಜಿಲ್ಲೆಯಲ್ಲಿ ೩, ಹೈಲಕಂಡಿಯಲ್ಲಿ ಇಬ್ಬರು ಮತ್ತು ಪಶ್ಚಿಮ ಕರ್ಬಿ ಆಂಗ್ಲಾಂಗ್ ಜಿಲ್ಲೆಯಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ. ರೆಮಲ್ ಚಂಡಮಾರುತದ ನಂತರ ನಿರಂತರ ಮಳೆಯ ಪರಿಣಾಮ ಪ್ರಮುಖ ನದಿಗಳ ನೀರಿನ ಮಟ್ಟ ಏರಿಕೆಯಾಗಿದ್ದು, ೧೧ ಜಿಲ್ಲೆಗಳಲ್ಲಿ ಸುಮಾರು ೩ ಲಕ್ಷದ ೫೦ ಸಾವಿರ ಸಂತ್ರಸ್ತರ ಮೇಲೆ ಇದು ಪರಿಣಾಮ ಬೀರಿದೆ. ಒಟ್ಟು ೫೬೦ ಗ್ರಾಮಗಳು ಪ್ರವಾಹದಿಂದ ಹಾನಿಗೊಳಗಾಗಿದ್ದು, ರಾಜ್ಯಾದ್ಯಂತ ೪೯೦೦ ಹೆಕ್ಟೇರ್‌ಗೂ ಹೆಚ್ಚು ಬೆಳೆ ಹಾನಿಯಾಗಿದೆ. ಕೊಪಿಲಿ, ಬರಾಕ್, ಕಟಖಲ್ ಮತ್ತು ಕುಶಿಯಾರಾ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ.

ಅಸ್ಸಾಂ ಸರ್ಕಾರವು ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ೧೪೮ ಪರಿಹಾರ ಶಿಬಿರ ಮತ್ತು ೩೯ ಪರಿಹಾರ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದ್ದು, ರಕ್ಷಣೆ ಮತ್ತು ಪರಿಹಾರಕ್ಕಾಗಿ **NDRF** ಮತ್ತು **SDRF** ತಂಡಗಳನ್ನು ನಿಯೋಜಿಸಲಾಗಿದೆ.

******

ಜಲಶಕ್ತಿ ಸಚಿವಾಲಯ ದೇಶದಲ್ಲಿ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ಕ್ಷೇತ್ರದಲ್ಲಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮೂಹ ಸಂವಹನ ಇಂಟರ್ನ್‌ಶಿಪ್ ಕಾರ್ಯಕ್ರಮವನ್ನು ಘೋಷಿಸಿದೆ. ಈ ಕಾರ್ಯಕ್ರಮವು ಆಯ್ದ ಅಭ್ಯರ್ಥಿಗಳಿಗೆ ಜಲಸಂಪನ್ಮೂಲ, ನದಿ ಅಭಿವೃದ್ಧಿ ಮತ್ತು ಜಲಶಕ್ತಿ ಸಚಿವಾಲಯದ ಅಡಿಯಲ್ಲಿ ಗಂಗಾ ಪುನರುಜ್ಜೀವನ ಇಲಾಖೆಯಲ್ಲಿ ಕಾರ್ಯ ನಿರ್ವಹಿಸಲು ಅವಕಾಶ ಕಲ್ಪಿಸುತ್ತದೆ.

ಸಮೂಹ ಸಂವಹನ, ಪತ್ರಿಕೋದ್ಯಮ ಅಥವಾ ಸಂಬಂಧಿತ ಕ್ಷೇತ್ರಗಳಲ್ಲಿ ತಮ್ಮ ಪದವಿಯನ್ನು ಪೂರ್ಣಗೊಳಿಸಿದ ವಿದ್ಯಾರ್ಥಿಗಳು ಅಥವಾ ಯಾವುದೇ ಮಾನ್ಯತೆ ಪಡೆದ ಕಾಲೇಜು ಅಥವಾ ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾವನ್ನು ಮಾಡಿರುವ ವಿದ್ಯಾರ್ಥಿಗಳು ಈ ಇಂಟರ್ನ್‌ಶಿಪ್‌ಗೆ ಅರ್ಹರಾಗಿರುತ್ತಾರೆ. ಇಂಟರ್ನ್‌ಶಿಪ್‌ನ ಅವಧಿ ಆರರಿಂದ ಒಂಬತ್ತು ತಿಂಗಳಾಗಿರುತ್ತದೆ ಎಂದು ಸಚಿವಾಲಯ ತಿಳಿಸಿದೆ. ಇಂಟರ್ನ್‌ಶಿಪ್ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ನಂತರ ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಂಗಳಿಗೆ ೧೫ ಸಾವಿರ ರೂಪಾಯಿಗಳ ಗೌರವಧನ ಮತ್ತು ಇಂಟರ್ನ್‌ಶಿಪ್ ಪ್ರಮಾಣಪತ್ರವನ್ನು ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಜೂನ್ ೨೯ ಕೊನೆಯ ದಿನವಾಗಿದೆ. ಇಂಟರ್ನ್‌ಶಿಪ್‌ಗೆ ಅರ್ಜಿ ಸಲ್ಲಿಸಲು ಆಸಕ್ತಿ ಹೊಂದಿರುವವರು ಜಲ ಶಕ್ತಿ ಸಚಿವಾಲಯದ ಅಧಿಕೃತ ಜಾಲತಾಣ ಭೇಟಿ ನೀಡಬಹುದಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

******

ಬಿಜೆಪಿಯ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ತಮಿಳುನಾಡಿನ ಕನ್ಯಾಕುಮಾರಿಯಲ್ಲಿ ಆರಂಭಿಸಿರುವ ಸ್ವಾಮಿ ವಿವೇಕಾನಂದ ಸ್ಮಾರಕದಲ್ಲಿ ೪೫ ಗಂಟೆಗಳ ಸುದೀರ್ಘ ಧ್ಯಾನ ಇಂದು ಪೂರ್ಣಗೊಳ್ಳಲಿದೆ. ತಮ್ಮ ಧ್ಯಾನ ಪೂರ್ಣಗೊಂಡ ಬಳಿಕ ಅವರು, ತಿರುವಳ್ಳುವರ್ ಪ್ರತಿಮೆ ಸ್ಥಳಕ್ಕೆ ಭೇಟಿ ನೀಡಲಿದ್ದು, ತಿರುವಳ್ಳುವರ್ ಅವರಿಗೆ ನಮನ ಸಲ್ಲಿಸಲಿದ್ದಾರೆ. ಬಳಿಕ ಅವರು, ತಿರುವನಂತಪುರಂಗೆ ಬಂದು, ದೆಹಲಿಗೆ ಮರಳಲಿದ್ದಾರೆ. ಪ್ರಧಾನಿ ಧ್ಯಾನಾಸಕ್ತರಾಗಿರುವ ಸ್ಥಳ ಸ್ವಾಮಿ ವಿವೇಕಾನಂದ ಅವರು ೧೮೯೨ರಲ್ಲಿ ಧ್ಯಾನ ಮಾಡಿದ ಸ್ಥಳವಾಗಿದೆ. ಕನ್ಯಾಕುಮಾರಿಯು ಭಾರತದ ದಕ್ಷಿಣದ ತುದಿಯಲ್ಲಿದ್ದು, ಬಂಗಾಳಕೊಲ್ಲಿ, ಅರೇಬಿಯನ್ ಸಮುದ್ರ ಮತ್ತು ಹಿಂದೂ ಮಹಾಸಾಗರ ಸಂಗಮವಾಗುವ ಸ್ಥಳವಾಗಿದೆ.

******

೨೦೨೩-೨೪ರ ಆರ್ಥಿಕ ವರ್ಷದ ಜಿಡಿಪಿ ಬೆಳವಣಿಗೆ ಸದೃಢ ಪ್ರಗತಿಯನ್ನು ಪ್ರದರ್ಶಿಸಿದ್ದು, ದೇಶದ ಆರ್ಥಿಕತೆ ಇನ್ನು ವೇಗವಾಗಿ ಬೆಳೆಯಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ದೇಶದ ಜನತೆಗೆ ಧನ್ಯವಾದ ತಿಳಿಸಿರುವ ಅವರು, ೨೦೨೩-೨೪ರ ಆರ್ಥಿಕ ವರ್ಷದ ೮.೨ ಪ್ರತಿಶತ ಜಿಡಿಪಿ ಬೆಳವಣಿಗೆ ಜಾಗತಿಕವಾಗಿ ಅತಿ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ಭಾರತದ್ದಾಗಿದೆ ಎಂಬುದನ್ನು ಸೂಚಿಸುತ್ತದೆ. ಆದರೆ ಇದು ಮುಂದಿನ ದಿನಗಳಲ್ಲಿ ಆಗಬಹುದಾದ ಬೆಳವಣಿಗೆಗೆ ಕೇವಲ ಮುನ್ನುಡಿಯಾಗಿದೆ.

******

ತಮಿಳುನಾಡಿನ ತಿರುವಳ್ಳೂರು ಜಿಲ್ಲೆಯ ಪೇಂಟ್ ಕಂಪನಿಯಲ್ಲಿ ನಿನ್ನೆ ಸಂಜೆ ಬೆಂಕಿ ಕಾಣಿಸಿಕೊಂಡು ಅವಘಡದಲ್ಲಿ ಇಬ್ಬರು ಸಾವನ್ನಪ್ಪಿದ್ದು, ನಾಲ್ವರ ಸ್ಥಿತಿ ಚಿಂತಾಜನಕವಾಗಿದೆ. ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಿಯಂತ್ರಿಸಲು ಪ್ರಯತ್ನಿಸಿದರು. ವಿದ್ಯುತ್ ಅವಘಡದಿಂದ ಬೆಂಕಿ ಕಾಣಿಸಿಕೊಂಡಿದೆ ಎನ್ನಲಾಗಿದೆ.

******

೨೦೨೪ರಲ್ಲಿ ಆರೋಗ್ಯ ಕ್ಷೇತ್ರದಲ್ಲಿನ ಪ್ರಚಾರಕ್ಕಾಗಿ ವಿಶ್ವ ಆರೋಗ್ಯ ಸಂಸ್ಥೆಯಿಂದ ನೀಡುವ ಪ್ರತಿಷ್ಠಿತ ನೆಲ್ಸನ್ ಮಂಡೇಲಾ ಪ್ರಶಸ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆ ಭಾಜನವಾಗಿದೆ. ಕೇಂದ್ರ ಆರೋಗ್ಯ ಸಚಿವ ಡಾ.ಮನ್ಸೂಖ್ ಮಾಂಡವೀಯ ಅವರು, ನಿಮ್ಹಾನ್ಸ್ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದ್ದು, ಈ ಪ್ರಶಸ್ತಿ "ಅಂತರ್ಗತ ಆರೋಗ್ಯ ರಕ್ಷಣೆಯಲ್ಲಿ ಭಾರತದ ಪ್ರಯತ್ನಗಳಿಗೆ ಮನ್ನಣೆ" ಎಂದು ಶ್ಲಾಘಿಸಿದ್ದಾರೆ. ಈ ಪ್ರಶಸ್ತಿಯು ನಿಮ್ಹಾನ್ಸ್‌ನ ಸಮರ್ಪಣೆ ಮತ್ತು ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತೇಜಿಸಲು ಅತ್ಯುತ್ತಮ ಕೊಡುಗೆಗಳಿಗೆ ಸಾಕ್ಷಿಯಾಗಿದೆ.

******

ಪ್ರಸಕ್ತ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಆದಾಯ ತೆರಿಗೆ ಇಲಾಖೆ, ದಾಖಲೆಯ ಒಂದು ಸಾವಿರದ ೧೦೦ ಕೋಟಿ ರೂಪಾಯಿ ನಗದು ಮತ್ತು ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದೆ. ಕಳೆದ ಬಾರಿ ೨೦೧೯ರ ಸಾರ್ವತ್ರಿಕ ಚುನಾವಣೆ ಸಮಯದಲ್ಲಿ ಆದಾಯ ತೆರಿಗೆ ಇಲಾಖೆಯು ವಶಪಡಿಸಿಕೊಂಡ ೩೯೦ ಕೋಟಿ ರೂಪಾಯಿಗಳಿಗೆ ಹೋಲಿಸಿದರೆ, ಇದು ಶೇಕಡ ೧೮೨ ರಷ್ಟು ಹೆಚ್ಚಳವಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

******

ಪ್ಯಾರಿಸ್‌ನಲ್ಲಿ ನಿನ್ನೆ ನಡೆದ ವಿಶ್ವ ಬಾಕ್ಸಿಂಗ್ ಕ್ವಾಲಿಫೈಯರ್ ಪಂದ್ಯಾವಳಿಯ ಪುರುಷರ ೭೧ ಕೆಜಿ ವಿಭಾಗದ ಕ್ವಾರ್ಟರ್‌ಫೈನಲ್‌ನಲ್ಲಿ ವಿಶ್ವ ಚಾಂಪಿಯನ್‌ಶಿಪ್‌ನ ಕಂಚಿನ ಪದಕ ವಿಜೇತ ನಿಶಾಂತ್ ದೇವ್ ಅವರು ಮೊಲ್ಡೊವಾದ ವಾಸಿಲೆ ಸೆಬೊಟರಿಯನ್ನು ೫-೦ ಅಂತರದಿಂದ ಸೋಲಿಸಿ ೨೦೨೪ ರ ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟಕ್ಕೆ ಅರ್ಹತೆ ಪಡೆದ ಮೊದಲ ಭಾರತೀಯ ಆಟಗಾರ ಎನಿಸಿಕೊಂಡರು. ಪ್ರಸ್ತುತ ಸಮ್ಮರ್ ಗೇಮ್ಸ್‌ಗೆ ಪ್ರವೇಶಿಸಿದ ಏಕೈಕ ಭಾರತೀಯ ಪುರುಷ ಬಾಕ್ಸರ್ ನಿಶಾಂತ್ ದೇವ್ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದ ನಾಲ್ಕನೇ ಭಾರತೀಯ ಬಾಕ್ಸರ್ ಆಗಿದ್ದಾರೆ.

******

ಆಮ್ ಆದ್ಮಿ ಪಕ್ಷದ ರಾಜ್ಯಸಭೆ ಸದಸ್ಯೆ ಸ್ವಾತಿ ಮಲಿವಾಲ್ ಮೇಲಿನ ಹಲ್ಲೆ ಪ್ರಕರಣದಲ್ಲಿ ತಮ್ಮನ್ನು ಬಂಧಿಸಿರುವುದನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಸಹಾಯಕ ಬಿಭವ್ ಕುಮಾರ್ ಸಲ್ಲಿಸಿರುವ ಅರ್ಜಿ ಕುರಿತ ಆದೇಶವನ್ನು ದೆಹಲಿ ಹೈಕೋರ್ಟ್ ನಿನ್ನೆ ಕಾಯ್ದಿರಿಸಿದೆ. ಕಳೆದ ತಿಂಗಳು ಅರವಿಂದ ಕೇಜ್ರಿವಾಲ್ ಅವರ ದೆಹಲಿಯ ಅಧಿಕೃತ ನಿವಾಸದಲ್ಲಿ ಬಿಭವ್ ಕುಮಾರ್ ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿ ಸ್ವಾತಿ ಮಲಿವಾಲ್ ದೂರು ನೀಡಿದ್ದರು. ಅದರಂತೆ ಬಿಭವ್ ಕುಮಾರ್ ಅವರನ್ನು ಇದೇ ೧೮ರಂದು ಪೊಲೀಸರು ಬಂಧಿಸಿದ್ದರು. ಇದನ್ನು ಪ್ರಶ್ನಿಸಿ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಸೋಮವಾರ ಬಿಭವ್ ಕುಮಾರ್ ಅವರಿಗೆ ದೆಹಲಿ ನ್ಯಾಯಾಲಯ ಜಾಮೀನು ನಿರಾಕರಿಸಿತು. ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

******